# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
# Karnataka Examinations Authority

ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿ.ಆರ್.15/2022-23 (ಕೆಕೆ) ದಿನಾಂಕ: 23-02-2023

ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿ.ಆರ್.15/2022-23 (ಆರ್‌ಪಿಸಿ) ದಿನಾಂಕ: 23-02-2023

## ನೇಮಕಾತಿ ಅಧಿಸೂಚನೆ

### [ಮಿಕ್ಕುಳಿದ ವೃಂದ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ (ಸ್ಥಳೀಯ) ವೃಂದದ ಹುದ್ದೆಗಳೂ ಸೇರಿದಂತೆ]

ಸರ್ಕಾರದ ನಿರ್ದೇಶನದಂತೆ, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಈ ಕೆಳಗಿನ ಸರ್ಕಾರಿ ಸಂಸ್ಥೆಗಳಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳಿಗೆ ನೇರ ನೇಮಕಾತಿಗೆ ಸಂಬಂಧಿಸಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸುತ್ತಿದೆ.

ಎ. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ಬೆಂಗಳೂರು.

ಬಿ. ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು

ಸಿ. ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಬೆಂಗಳೂರು

ಡಿ. ಕರ್ನಾಟಕ ಸ್ಟೇಟ್ಸ್ ಮಿನರಲ್ಸ್ ಕಾರ್ಪೋರೇಶನ್ ಲಿಮಿಟೆಡ್, ಬೆಂಗಳೂರು

ಇ. ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು

ಮೇಲೆ ಸೂಚಿಸಿರುವ ಪ್ರತಿಯೊಂದು ಸಂಸ್ಥೆಯಲ್ಲಿನ ನೇಮಕಾತಿಯ ಹುದ್ದೆಗಳ ಹೆಸರು, ಒಟ್ಟು ಹುದ್ದೆಗಳ ಸಂಖ್ಯೆ, ಹುದ್ದೆವಾರು ಮತ್ತು ವರ್ಗವಾರು ಖಾಲಿ ಹುದ್ದೆಗಳು ಹಾಗು ವಿವಿಧ ಹುದ್ದೆಗಳಿಗೆ ನಿಗದಿಪಡಿಸಿರುವ ವಯಸ್ಸು, ಅರ್ಹತಾ ಷರತ್ತುಗಳು, ಶೈಕ್ಷಣಿಕ ಅರ್ಹತೆಗಳು, ಸ್ಪರ್ಧಾತ್ಮಕ ಪರೀಕ್ಷೆಯ ಪೇಪರ್‌ಗಳು, ಆಯ್ಕೆಯ ವಿಧಾನ ಮತ್ತು ನೇಮಕಾತಿ ಹಾಗು ಇತರ ವಿವರಗಳನ್ನು ಸದ್ಯದಲ್ಲಿಯೇ ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗುವುದು.

ಅರ್ಹ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ಸೂಕ್ತವಾದ URL ಅನ್ನು ಆಯ್ಕೆ ಮಾಡುವ ಮೂಲಕ ಆನ್‌ಲೈನ್ ಮೂಲಕ ಮಾತ್ರ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ನೊಂದಣಿ ಮಾಡಿಕೊಳ್ಳಲು, ಅರ್ಜಿ ಸಲ್ಲಿಸಲು ಹಾಗು ಶುಲ್ಕ ಪಾವತಿಸಲು ವೇಳಾಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟನಲ್ಲಿ ಪ್ರಕಟಿಸಲಾಗುವುದು. ಈ ಅಧಿಸೂಚನೆಯಲ್ಲಿ ಸೂಚಿಸಲಾಗಿರುವ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು 2023 ರ ಜೂನ್-ಜುಲೈ ಅವಧಿಯಲ್ಲಿ ನಡೆಸುವ ಸಾಧ್ಯತೆ ಇದ್ದು, ಸ್ಪರ್ಧಾತ್ಮಕ ಪರೀಕ್ಷೆಯನ್ನು ಬೆಂಗಳೂರಿನಲ್ಲಿ ಮಾತ್ರ ನಡೆಸಲಾಗುವುದು. ಅಭ್ಯರ್ಥಿಗಳು ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಬೇಕು.

ಗಮನಿಸಿ:

1. ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು, ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗುವುದು ಅಭ್ಯರ್ಥಿಗಳಿಗೆ ಈ ಮೇಲಿನ ಹುದ್ದೆಗಳಿಗೆ ನೇಮಕಾತಿಯ ಯಾವುದೇ ಹಕ್ಕನ್ನು ನೀಡುವುದಿಲ್ಲ, ನೇಮಕಾತಿಯು ಸರ್ಕಾರವು ನಿಗದಿಪಡಿಸಬಹುದಾದ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.
2. ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 (ತಿದ್ದುಪಡಿಗಳು) ಹಾಗು ಕರ್ನಾಟಕ ಸರ್ಕಾರದ ನೇಮಕಾತಿ ಅಧಿಸೂಚನೆಗಳು / ಆದೇಶಗಳಲ್ಲಿರುವಂತೆ ಅನ್ವಯಿಸುತ್ತದೆ.

(ಎಸ್. ರಮ್ಯ ಭಾ.ಆ.ಸೇ.)
ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in